ಒಟ್ಟು	1775	305300	1500
ಉಡುಪಿ			
1 ಕಾರ್ಕಳ	189	32508	250
2 ಕುಂದಾಪುರ	343	58996	250
3 ಉಡುಪಿ	495	85140	250
ಒಟ್ಟು	1027	176644	750

ಯಶಸ್ವಿನಿ ಯೋಜನೆಯ ಮಾಹಿತಿಯ ಬಗ್ಗೆ

4269 (4865) : ಶ್ರೀ ಸುಬಾನಂದ ಗೌಡ ಡಿ.ವಿ. (ಪುತ್ತೂರು) ಮಾನ್ಯ ಸಹಕಾರ ಸಚಿವರು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಯಶಸ್ವಿನಿ ಯೋಜನೆಯಡಿಯಲ್ಲಿ ಸದಸ್ಯರಾಗಿರುವ ರೈತರ ಸಂಖ್ಯೆ ಎಷ್ಟು?

ಆ) ಈ ಯೋಜನೆಯಡಿಯಲ್ಲಿ ಕಾಯಿಲೆಗೆ ಚಿಕಿತ್ಸೆ ಪಡೆದುಕೊಳ್ಳಲು ಆಯಾ ಜಿಲ್ಲಾ ಮಟ್ಟದಲ್ಲಿ ಖಾಸಗಿ ಆಸ್ಪತ್ರೆಗಳಲ್ಲಿ ಸೌಲಭ್ಯ ಒದಗಿಸಲಾಗಿದೆಯೇ?

ಇ) ಖಾಸಗಿ ಆಸ್ಪತ್ರೆಗಳಲ್ಲಿ ಈ ಯೋಜನೆಯ ಸೌಲಭ್ಯ ಒದಗಿಸಲಾಗಿದ್ದಲ್ಲಿ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮತ್ತು ಉಡುಪಿ ಜಿಲ್ಲೆಗಳಲ್ಲಿ ಯಾವ ಯಾವ ಖಾಸಗಿ ಆಸ್ಪತ್ರೆಗಳಲ್ಲಿ ಈ ಯೋಜನೆಯನ್ವಯ ವೈದ್ಯಕೀಯ ಚಿಕಿತ್ಸೆ ಪಡೆದುಕೊಳ್ಳಲು ಅವಕಾಶವಿದೆ.

ಈ) ಖಾಸಗಿ ಆಸ್ಪತ್ರೆಗಳ ಸೌಲಭ್ಯವಿಲ್ಲದಿದ್ದಲ್ಲಿ, ಕಾರಣವೇನು?

ಶ್ರೀ ಹೆಚ್.ವಿಶ್ವನಾಥ್ (ಸಹಕಾರ ಸಚಿವರು)

ಅ) ಈ ವರೆಗೂ 16.01 ಲಕ್ಷ ರೈತ ಸದಸ್ಯರನ್ನು ನೊಂದಾಯಿಸಲಾಗಿದೆ.

ಆ) ಈ ಯೋಜನೆಯಡಿ ಚಿಕಿತ್ಸೆ ಪಡೆದುಕೊಳ್ಳಲು ರಾಜ್ಯಾದ್ಯಂತ 71 ಖಾಸಗಿ ಆಸ್ಪತ್ರೆಗಳು ಹಾಗೂ ನರ್ಸಿಂಗ್ ಹೋಂಗಳಲ್ಲಿ ಸೌಲಭ್ಯ ಒದಗಿಸಲಾಗಿದೆ.

ಇ) ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳ ಕೆಳಕಂಡ ಖಾಸಗಿ ಆಸ್ಪತ್ರೆಗಳಲ್ಲಿ ವೈದ್ಯಕೀಯ ಚಿಕಿತ್ಸೆ ಪಡೆದುಕೊಳ್ಳಲು ಅವಕಾಶವಿದೆ.

ದಕ್ಷಿಣ ಕನ್ನಡ ಜಿಲ್ಲೆ

1) ಫಾದರ್ ಮುಲ್ಲ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆ, ಬೆಂಗಳೂರು.

2) ಎ.ಜೆ.ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ ಬೆಂಗಳೂರು.

ಉಡುಪಿ ಜಿಲ್ಲೆ

1) ವಿನಯಾ ಆಸ್ಪತ್ರೆ, ಕುಂದಾಪುರ

2) ಆದರ್ಶ ಆಸ್ಪತ್ರೆ, ಕುಂದಾಪುರ

3) ಮಿತ್ರಾ ಆಸ್ಪತ್ರೆ ಮತ್ತು ಡಯಾಗ್ನಸ್ಟಿಕ್ ಸೆಂಟರ್ ಉಡುಪಿ.

4) ಸಿಟಿ ಆಸ್ಪತ್ರೆ ಮತ್ತು ಡಯಾಗ್ನಸ್ಟಿಕ್ ಸೆಂಟರ್ ಉಡುಪಿ

ಈ) ಖಾಸಗಿ ಆಸ್ಪತ್ರೆಗಳಲ್ಲಿ ಈ ಸೌಲಭ್ಯ ಒದಗಿಸಲಾಗಿದೆ.